**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಹೆಚ್.ಎಸ್.ಗೋಪಿನಾಥ್ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

---

**ಸೂಚನೆ:**

ರಾಜ್ಯದ ಕಂದಾಯ ಭೂಮಿಯಲ್ಲಿ ನಿರ್ಮಾಣಗೊಂಡಿರುವ ಅನೇಕ ಬಡಾವಣೆ ನಿವೇಶನಗಳಲ್ಲಿ ಸಾವಿರಾರು ಮನೆಗಳು ನಿರ್ಮಾಣಗೊಂಡಿವೆ. ಸರ್ವೋಚ್ಚ ನ್ಯಾಯಾಲಯದ ಆದೇಶಗಳ ಹಿನ್ನೆಲೆಯಲ್ಲಿ ಸಂಬಂಧಿತ ಪ್ರಾಧಿಕಾರಗಳು ಒಸಿ (Occupancy Certificate) ಮತ್ತು ಸಿಸಿ (Completion Certificate) ಇಲ್ಲದ ಮನೆಗಳಿಗೆ ನೀರು, ವಿದ್ಯುತ್ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ನೀಡುವುದನ್ನು ನಿರಾಕರಿಸುತ್ತಿದೆ. ಇದರ ನಡುವೆ, ಕರ್ನಾಟಕ ಸರ್ಕಾರವು 30*40ಅಡಿಗಳ ನಿವೇಶನಗಳ ಮನೆಗಳಿಗೆ ಒಸಿ/ಸಿಸಿ ಇಲ್ಲದಿದ್ದರೂ ಕೆಲವು ನಿಯಮಾವಳಿಗಳನ್ನು ತಿದ್ದುಪಡಿ ಮಾಡಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಆದೇಶ ನೀಡಿದೆ. ಆದಾಗ್ಯೂ ರಾಜ್ಯದಲ್ಲಿ ನಿಯಮ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಅಂದಾಜು ಎರಡು ಲಕ್ಷಕ್ಕೂ ಹೆಚ್ಚು ಮನೆಗಳ ನಿವಾಸಿಗಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಬಹುತೇಕ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಮೂಲಭೂತ ಹಕ್ಕುಗಳಾದ ನೀರು, ವಿದ್ಯುತ್ ಮತ್ತು ಒಳಚರಂಡಿ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಮಾನ್ಯ ನಗರಾಭಿವೃದ್ಧಿ ಸಚಿವರಲ್ಲಿ ಗಮನಸೆಳೆಯಲು ಬಯಸುತ್ತೇನೆ.

**ಉತ್ತರ:**

ಮಾನ್ಯ ಸರ್ವೋಚ್ಚ ನ್ಯಾಯಾಲಯವು SLP(C) ಸಂಖ್ಯೆ:36440/2024 ದಿನಾಂಕ:17.12.2024ರಲ್ಲಿ ನೀಡಿರುವ ಆದೇಶದಲ್ಲಿ ಕಟ್ಟಡ ನಿರ್ಮಾಣ ಮಾಡಿ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಂದ ವಾಸಯೋಗ್ಯ ಪ್ರಮಾಣ ಪತ್ರ ಪಡೆದ ನಂತರವೇ, ವಿದ್ಯುತ್, ನೀರು ಸರಬರಾಜು ಮತ್ತು ಒಳಚರಂಡಿ ಸಂಪರ್ಕಗಳನ್ನು ನೀಡಲು ಸೂಚಿಸಿದ್ದು, ಕಟ್ಟಡ ಪರವಾನಿಗೆ ಪಡೆದು ಕಟ್ಟಡ ನಿರ್ಮಾಣ ಪೂರ್ಣವಾದ ನಂತರ ವಾಸಯೋಗ್ಯ ಪ್ರಮಾಣ ಪತ್ರ ಪಡೆಯುವುದು ಅಗತ್ಯವಾಗಿರುತ್ತದೆ.

ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸಣ್ಣ ಪ್ರಮಾಣದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರಿಗೆ ವಿನಾಯಿತಿ ನೀಡುವುದರಿಂದ, ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಲು ಸಹಕಾರಿಯಾದಂತಾಗುತ್ತದೆ ಎಂಬುದನ್ನು ಸರ್ಕಾರವು ಮನಗಂಡು, ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ 1976ರ ಕಲಂ 310(3) ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರದನ್ವಯ ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಿರುವ ನೆಲ+2 ಅಂತಸ್ತು ಅಥವಾ Stilt+3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy Certificate) ಪಡೆಯುವುದರಿಂದ ಸರ್ಕಾರದ ಆದೇಶ ಸಂಖ್ಯೆ: ನಅಇ 283 ಎಂಎನ್ಇ 2025, ದಿನಾಂಕ:24.10.2025ರಲ್ಲಿ ವಿನಾಯಿತಿ ನೀಡಿ ಆದೇಶಿಸಲಾಗಿರುತ್ತದೆ.

ಇದರಿಂದ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಿಗೆ ವಿದ್ಯುತ್ ಸಂಪರ್ಕ, ನೀರು ಸರಬರಾಜು ಮತ್ತು ಒಳಚರಂಡಿ ಸೌಲಭ್ಯ ಪಡೆಯಲು ಯಾವುದೇ ತೊಂದರೆಯಾಗುತ್ತಿಲ್ಲ.

ಅಲ್ಲದೇ, ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಮಾಡಲು ಕಟ್ಟಡ ಪರವಾನಗಿ ಪಡೆದು ಶೇ.15 ಕ್ಕಿಂತ ಕಡಿಮೆ ಪ್ರಮಾಣದಲ್ಲಿ ಉಲ್ಲಂಘಿಸಿದ ಕಟ್ಟಡಗಳಿಗೆ ದಂಡವನ್ನು ಪಾವತಿಸಿಕೊಂಡು ಪರಿಷ್ಕೃತ ನಕ್ಷೆಯನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ: ನಅಇ 139 ಜಿಇಎಲ್ 2025, ದಿನಾಂಕ:30.10.2025ರಲ್ಲಿ ಅವಕಾಶ ಕಲ್ಪಿಸಲಾಗಿದೆ.

**ಕಡತ ಸಂಖ್ಯೆ: ನಅಇ 102 ಎಂಎನ್ಇ 2026 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ
ಸಚಿವರು